ಕರ್ನಾಟಕ ವಿಧಾನ ಪರಿಷತ್

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	103
2)	ಮಾನ್ಯ ಸದಸ್ಯರ ಹೆಸರು	ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ)
3)	ಉತ್ತರಿಸಬೇಕಾದ ದಿನಾಂಕ	21/09/2020
4)	ಉತ್ತರಿಸುವವರು	ಉಪ ಮುಖ್ಯಮಂತ್ರಿಗಳು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಎಷ್ಟು ಜನ ಕೆಲಸ ನಿರ್ವಹಿಸುತ್ತಿದ್ದಾರೆ; (ಅವರ ಹೆಸರು ಮತ್ತು ಕೆಲಸ ನಿರ್ವಹಿಸುತ್ತಿರುವ ಸಂಸ್ಥೆಯ ಹೆಸರು ಹಾಗೂ ಅವರು ಅತಿಥಿ ಉಪನ್ಯಾಸಕರಾಗಿ ಯಾವ ದಿನಾಂಕದಿಂದ ಕೆಲಸ ನಿರ್ವಹಿಸುತ್ತಿದ್ದಾರೆ ಎಂಬ ಬಗ್ಗೆ ಸಂಸ್ಥೆವಾರು, ತಾಲ್ಲೂಕುವಾರು ಮತ್ತು ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು)	2019–20ನೇ ಶೈಕ್ಷಣಿಕ ಸಾಲಿನಲ್ಲಿ ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಕಲಬುರಗಿ ವಿಭಾಗದಲ್ಲಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಒಟ್ಟು 958 ಅತಿಥಿ ಬೋಧಕರನ್ನು ನೇಮಿಸಿಕೊಳ್ಳಲಾಗಿರುತ್ತದೆ. ಸದರಿ ಸಾಲಿನ ಶೈಕ್ಷಣಿಕ ಅವಧಿ ಪೂರ್ಣಗೊಂಡಿರುವುದರಿಂದ ನೇಮಿಸಿಕೊಂಡಿದ್ದ ಅತಿಥಿ ಬೋಧಕರನ್ನು ಬಿಡುಗಡೆಗೊಳಿಸಲಾಗಿರುತ್ತದೆ. ಪ್ರಸಕ್ತ ಸಾಲಿನ ಪ್ರವೇಶಾತಿ ಆರಂಭವಾಗಿದ್ದು, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಅತಿಥಿ ಬೋಧಕರನ್ನು ಆಹ್ವಾನಿಸಲು ಸುತ್ತೋಲೆ ಹೊರಡಿಸಲಾಗಿದೆ. ಸದರಿ ಸಾಲಿಗೆ ಸಂಸ್ಥೆಗಳ ಪ್ರವೇಶಾತಿ ಅನುಸಾರ ಅತಿಥಿ ಬೋಧಕರನ್ನು ನೇಮಕಾತಿ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ.
ಆ)	ಕಳೆದ 15–20 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಇವರನ್ನು ಖಾಯಂ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;	ಇಲ್ಲ.
ಇ)	ಇಷ್ಟು ವರ್ಷ ಕೆಲಸ ಮಾಡಿ ಅನುಭವ ಹೊಂದಿದ ಇವರ ಅನುಭವವನ್ನು ಪರಿಗಣಿಸಿ ಸರ್ಕಾರ ತಕ್ಷಣ ಇವರನ್ನು ಖಾಯಂ ಮಾಡಲು ಸರ್ಕಾರಕ್ಕೆ ಇರುವ ತೊಂದರೆ ಏನು?	ದಿ: 10/04/2006 ರಂದು ಉಮಾದೇವಿ ಪ್ರಕರಣದನ್ವಯ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನಂತೆ ಅತಿಥಿ ಬೋಧಕರನ್ನು ಖಾಯಂ ಮಾಡಲು ಸಾಧ್ಯವಿರುವುದಿಲ್ಲ.

ಸಂಖ್ಯೆ: ಕೌಉಜೀಇ 40 ಕೈತಪ್ರ 2020

(ಡಾ.ಸಿ.ಎನ್.ಅಶ್ವಥ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು